**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 877 |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 09.03.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆಯಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರೂಪಿಸಿರುವ ನೀತಿಗಳು / ನಿಯಮಗಳೇನು; ಅವು ಯಾವುವು; | ಬಂದಿರುತ್ತದೆ.<br>ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರಾಜ್ಯದಲ್ಲಿ ದಿನಾಂಕ 05.05.2020 ರಂದು ಹೊಸ ಮರಳು ನೀತಿ, 2020 ನ್ನು ಜಾರಿಗೊಳಿಸಿದ್ದು, ಅದರ ಪ್ರಮುಖಾಂಶಗಳು ಕೆಳಕಂಡಂತಿವೆ;<br>• ಸದರಿ ಮರಳು ನೀತಿಯಂತೆ I, II ಮತ್ತು III ನೇ ಶ್ರೇಣಿಯ ಹಳ್ಳ / ತೊರೆ ಮತ್ತು ಕೆರೆಗಳಲ್ಲಿ ಲಭ್ಯವಿರುವ ಮರಳನ್ನು ತೆಗೆಯುವ ಮತ್ತು ವಿಲೇವಾರಿ ಮಾಡುವ ಸಂಪೂರ್ಣ ಹೊಣೆಗಾರಿಕೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್‌ಗಳಿಗೆ ವಹಿಸಲಾಗಿರುತ್ತದೆ.<br>• ಸದರಿ ಗ್ರಾಮ ಪಂಚಾಯಿತಿಯಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 300/- ಗಳನ್ನು ನಿಗದಿಪಡಿಸಲಾಗಿರುತ್ತದೆ.<br>• IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ಸರ್ಕಾರಿ ಆದೇಶ ಸಂಖ್ಯೆ ಸಿಐ 344 ಎಂಎಂಎನ್ 2019, ದಿನಾಂಕ: 18.05.2020 ರಂತೆ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೋರೇಶನ್ ಲಿ., ಮತ್ತು ಹಟ್ಟಿ ಚಿನ್ನದ ಗಣಿ ನಿಯಮಿತ ಇವರಿಗೆ ವಹಿಸಲಾಗಿರುತ್ತದೆ. |

--2

| | | |
|---|---|---|
| | | • ಸದರಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 700/- ಗಳನ್ನು ನಿಗದಿಪಡಿಸಲಾಗಿರುತ್ತದೆ.<br>• IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ಆನ್‌ಲೈನ್ ಬುಕಿಂಗ್ ವ್ಯವಸ್ಥೆಯಡಿ ಸಾರ್ವಜನಿಕರಿಗೆ ಮರಳು ಪೂರೈಸಲು ಅವಕಾಶ ಕಲ್ಪಿಸಲಾಗಿದೆ. |
| ಆ. | ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಮರಳು ಪೂರೈಕೆಯ ಸ್ಥಳಗಳು ಯಾವವು ಮತ್ತು ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರ ಎಷ್ಟು;(ವಿವರವಾದ ಮಾಹಿತಿ ನೀಡಿವುದು) | ಬೀದರ ಜಿಲ್ಲೆಯಲ್ಲಿ ಹರಿಯುವ ಮಾಂಜ್ರಾ ನದಿ ಪಾತ್ರದಲ್ಲಿ ದೊರೆಯುವ ಮರಳು ಕಟ್ಟಡ ಕಾಮಗಾರಿಗಳಿಗೆ ಬಳಸಲು ಯೋಗ್ಯವಾಗಿಲ್ಲದ ಕಾರಣ ಜಿಲ್ಲೆಯಲ್ಲಿ ಯಾವುದೇ ಮರಳು ಬ್ಲಾಕುಗಳನ್ನು ಗುರುತಿಸಿರುವುದಿಲ್ಲ.<br>ಪ್ರಸ್ತುತ, ಬೀದರ ಜಿಲ್ಲೆಗೆ ನೆರೆಯ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಿಂದ ಹಾಗೂ ಮಹಾರಾಷ್ಟ್ರ ರಾಜ್ಯದಿಂದ ಮರಳು ಸರಬರಾಜು ಆಗುತ್ತಿರುತ್ತದೆ. |
| ಇ | ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳುಗಾರಿಕೆ (ಬ್ಲ್ಯಾಕ್ ಸ್ಯಾಂಡ್) ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಎಷ್ಟು ಟನ್ ಮರಳು ಜಪ್ತಿ ಮಾಡಿಕೊಳ್ಳಲಾಗಿದೆ? (ವಿವರವಾದ ಮಾಹಿತಿ ನೀಡುವುದು) | ಬಂದಿರುತ್ತದೆ.<br>ಬೀದರ್ ಜಿಲ್ಲೆಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಗುತ್ತಿದೆ.<br>ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ದಾಸ್ತಾನಿನಡಿ 02 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಒಟ್ಟು 150 ಮೆಟ್ರಿಕ್ ಟನ್ ಮರಳನ್ನು ವಶಪಡಿಸಿಕೊಂಡು ನಿಯಮಾನುಸಾರ ವಿಲೇವಾರಿ ಮಾಡಲಾಗಿದ್ದು ಸರ್ಕಾರಕ್ಕೆ ರೂ.1.35ಲಕ್ಷಗಳ ರಾಜಧನ ಪಾವತಿಯಾಗಿರುತ್ತದೆ. |

| | | |
|---|---|---|
| | | ಮುಂದುವರೆದು, ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ 2019-20 ಮತ್ತು 2021-21 ನೇ ಸಾಲಿನ ಜನವರಿ ಅಂತ್ಯದವರೆಗೆ ಅನಧಿಕೃತ ಮರಳು ಸಾಗಾಣಿಕೆಯಡಿ ಕೈಗೊಂಡ ಕ್ರಮದ ವಿವರಗಳು ಈ ಕೆಳಗಿನಂತಿದೆ. |

| ಕ್ರ ಸಂ | ವರ್ಷ | ಪತ್ತೆ ಹಚ್ಚಿದ ವಾಹನಗಳ ಸಂಖ್ಯೆ | ವಿಧಿಸಿದ ದಂಡ (ರೂ. ಲಕ್ಷಗಳಲ್ಲಿ) |
|---|---|---|---|
| 1 | 2019-20 | 78 | 16.70 |
| 2 | 2020-21 | 43 | 13.21 |

ಸಂಖ್ಯೆ ಸಿಐ 128 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)
ಗಣಿ ಮತ್ತು ಭೂವಿಜ್ಞಾನ ಸಚಿವರು.